## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಚಿಕ್ಕಬಳ್ಳಾಪುರ ಜಿಲ್ಲೆ, ಗೌರಿಬಿದನೂರು ತಾಲ್ಲೂಕು ವ್ಯಾಪ್ತಿಯ ಗ್ರಾಮಗಳಲ್ಲಿ ಅಂತರ್ಜಲ ಮರುಪೂರಣ ಕಾಮಗಾರಿಗಳಿಗೆ ವಿಶೇಷ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:- ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಚಿಕ್ಕಬಳ್ಳಾಪುರರವರ ಪ್ರಸ್ತಾವನೆ ಸಂಖ್ಯೆ:ಜಿ.ಪಂಚಿ/ಅಭಿ/NRDWP/ಕುನೀಸ/ಕ್ರಿಯೋ/ಸಿಬ್ಬಂದಿ-3, ದಿನಾಂಕ:08.10.2012.

--

**ಪೀಠಿಕೆ:**

ಚಿಕ್ಕಬಳ್ಳಾಪುರ ಜಿಲ್ಲೆ, ಗೌರಿಬಿದನೂರು ತಾಲ್ಲೂಕು ವ್ಯಾಪ್ತಿಯ ಗ್ರಾಮಗಳಲ್ಲಿ ಅಂತರ್ಜಲ ಮರುಪೂರಣ ಕಾಮಗಾರಿಗಳನ್ನು ಪೂರ್ಣಗೊಳಿಸಲು ಹೆಚ್ಚುವರಿ ಅನುದಾನ ಬಿಡುಗಡೆ ಮಾಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಚಿಕ್ಕಬಳ್ಳಾಪುರ ಇವರು ಸರ್ಕಾರವನ್ನು ವಿನಂತಿಸಿರುತ್ತಾರೆ. ಅದರಂತೆ **ರೂ.4.50ಲಕ್ಷ**ಗಳ ಅನುದಾನವನ್ನು ಚಿಕ್ಕಬಳ್ಳಾಪುರ ಜಿಲ್ಲೆ, ಗೌರಿಬಿದನೂರು ತಾಲ್ಲೂಕು ವ್ಯಾಪ್ತಿಯ ಗ್ರಾಮಗಳಲ್ಲಿ ಅಂತರ್ಜಲ ಮರುಪೂರಣ ಕಾಮಗಾರಿಗಳನ್ನು ಪೂರ್ಣಗೊಳಿಸುವ ಸಂಬಂಧ ಬಿಡುಗಡೆ ಮಾಡಲು ನಿರ್ಧರಿಸಿದೆ, ಆದ್ದರಿಂದ ಈ ಆದೇಶ.

### ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 243 ಗ್ರಾನೀಸ(4)2012 ಬೆಂಗಳೂರು, ದಿನಾಂಕ:03.01.2013

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಚಿಕ್ಕಬಳ್ಳಾಪುರ ಜಿಲ್ಲೆ, ಗೌರಿಬಿದನೂರು ತಾಲ್ಲೂಕು ವ್ಯಾಪ್ತಿಯ ಕೆಳಕಂಡ ಗ್ರಾಮಗಳಲ್ಲಿ ಅಂತರ್ಜಲ ಮರುಪೂರಣ ಕಾಮಗಾರಿಗಳನ್ನು ಪೂರ್ಣಗೊಳಿಸಲು **ರೂ. 4.50ಲಕ್ಷ**(ನಾಲ್ಕು ಲಕ್ಷ ಐವತ್ತು ಸಾವಿರ ರೂಪಾಯಿಗಳು ಮಾತ್ರ)ಗಳ ಅನುದಾನವನ್ನು **2012-13ನೇ** ಸಾಲಿಗೆ ರಾಜ್ಯ ವಲಯದ **Sustainability** ಘಟಕದಡಿ ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್‌ಗೆ ಹೆಚ್ಚುವರಿಯಾಗಿ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

| ಕ್ರ.ಸಂ. | ತಾಲ್ಲೂಕು | ಗ್ರಾಮ ಪಂಚಾಯತಿ | ಗ್ರಾಮ | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|---|
| 1. | ಗೌರಿಬಿದನೂರು | ನಗರಗೆರೆ | ನಗರಗೆರೆ | 2.00 |
| 2. | ಗೌರಿಬಿದನೂರು | ನಕ್ಕಲಹಳ್ಳಿ | ನರಸಾಪುರ | 2.00 |
| 3. | ಗೌರಿಬಿದನೂರು | ರಾಮಾಪುರ | ಕುಡ್ಡಿಡಿಹಳ್ಳಿ | 0.20 |
| 4. | ಗೌರಿಬಿದನೂರು | ತೊಂಡೆಬಾವಿ | ತೊಂಡೆಬಾವಿ | 0.30 |
| | | | **ಒಟ್ಟು** | **4.50** |

2. ಅನುಷ್ಠಾನಗೊಳಿಸಿರುವ ಕಾಮಗಾರಿಗಳ ವಿವರಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ಮಾಹಿತಿಗಾಗಿ ಕಳುಹಿಸುವುದು. ಜಿಲ್ಲಾ ಪಂಚಾಯತ್ ಯಾವುದೇ ಕಾರಣಕ್ಕೂ ಈ ಆದೇಶದಲ್ಲಿ ಹೇಳಲಾದ ಕಾಮಗಾರಿಗಳು ಇತರೆ ಯಾವುದೇ ಯೋಜನೆಗಳಡಿ ಪುನರಾವರ್ತನೆಯಾಗದಂತೆ ನೋಡಿಕೊಳ್ಳತಕ್ಕದ್ದು ಹಾಗೂ ಕಾಮಗಾರಿಗಳ ಅನುಷ್ಠಾನಕ್ಕೆ ಮುನ್ನ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆ ಪಡೆದುಕೊಳ್ಳತಕ್ಕದ್ದು.

3. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಕೇಂದ್ರವಲಯದ **Sustainability** ಘಟಕದಡಿ ಗಣನೆಗೆ ತೆಗೆದುಕೊಂಡು, **RTGS** ಮುಖೇನ ಈಗಾಗಲೇ ಗೊತ್ತುಪಡಿಸಿರುವ **SWSM** ಬ್ಯಾಂಕ್ ಖಾತೆ ಮುಖೇನ ವಿನಿಯೋಗಿಸತಕ್ಕದ್ದು. ಸಿಂಡಿಕೇಟ್ ಬ್ಯಾಂಕ್ ಮೂಲ ಖಾತೆ **ಸಂಖ್ಯೆ:04462010091577** ರಿಂದ **Sustainability** ಕಾರ್ಯಕ್ರಮದ ಖಾತೆ **ಸಂಖ್ಯೆ:04462010094587ಕ್ಕೆ ರೂ.4.50ಲಕ್ಷ**ಗಳನ್ನು ವರ್ಗಾಯಿಸಿ, ಸದರಿ ಅನುದಾನದಿಂದ **Sustainability** ಘಟಕದಡಿ ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಕಳುಹಿಸುವ ಬಿಲ್‌ಗಳನ್ನು ಮಾನ್ಯ ಮಾಡತಕ್ಕದ್ದು. ಸದರಿ ಅನುದಾನ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಗಳನ್ನು **CE/PRED** ಹಾಗೂ **ಚಿಕ್ಕಬಳ್ಳಾಪುರ** ಜಿಲ್ಲಾ ಪಂಚಾಯತ್ **IMIS**ನಡಿ ದಾಖಲಿಸತಕ್ಕದ್ದು.

4. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 117 ಗ್ರಾನೀಸ(4) 2011 ದಿ:15.10.2011 ರನ್ವಯ ಸಂಬಂಧಪಟ್ಟ ಅಧೀಕ್ಷಕ ಅಭಿಯಂತರರು, **PRED** ವೃತ್ತ ಕಛೇರಿ ಇವರುಗಳು ಈ ಆದೇಶದಡಿ ಅನುಷ್ಠಾನಗೊಳಿಸುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪರಿವೀಕ್ಷಣೆ ಮಾಡಿ, ಸರ್ಕಾರಕ್ಕೆ ವಾಸ್ತವಿಕ ಚಿತ್ರಣ ನೀಡತಕ್ಕದ್ದು

5. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ IFAರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ/13/ಆಂ.ಆ.ಸ/2012, ದಿನಾಂಕ:02.04.2012 ಮತ್ತು ಸಹಮತಿ ಸಂಖ್ಯೆ: ಗ್ರಾಅಪ/131/ಪಿಬಿಎಸ್/2012 ದಿನಾಂಕ:19/11/2012ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು–2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು–1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1.
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು–1.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು–1.
11. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾಮಂಡಳಿ, ಸಂಕೀರ್ಣ ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು–20.
12. ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ
13. ಜಿಲ್ಲಾ ಪಂಚಾಯತ್ ಅಧ್ಯಕ್ಷರು, ಚಿಕ್ಕಬಳ್ಳಾಪುರ
14. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು, ಚಿಕ್ಕಬಳ್ಳಾಪುರ
15. ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಗೌರಿಬಿದನೂರು.
16. ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಅಧೀಕ್ಷಕ ಅಭಿಯಂತರರು, ಚಿಕ್ಕಬಳ್ಳಾಪುರ
17. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್, ಚಿಕ್ಕಬಳ್ಳಾಪುರ
18. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು–20.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ,ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
20. ನಿರ್ದೇಶಕರು **KRWSSA** ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ/ನಿರ್ದೇಶಕರು(ಗ್ರಾಮಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, **RDPR** ಇಲಾಖೆ ಇವರುಗಳ ಆಪ್ತ ಸಹಾಯಕರು.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, **BWSSB Branch**, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು–9.
22. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
26. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
27. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.